44441
ದಿನಾಂಕ 23/10/18

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** M/s Petronet MHB Limited., ಕಂಪನಿಗೆ ಹಾಸನ ಜಿಲ್ಲೆ ಮತ್ತು ತಾಲ್ಲೂಕಿನ ಬೊಮ್ಮನಾಯಕನಹಳ್ಳಿ ಗ್ರಾಮದಲ್ಲಿ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ವಂತ ಬಳಕೆಗಾಗಿ (Captive) ಸ್ಥಾಪಿಸಲು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

**ಓದಲಾಗಿದೆ:** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 890(ಎಸ್‌ಜಿ).

* * *

**ಪ್ರಸ್ತಾವನೆ :-**

M/s Petronet MHB Limited., ಕಂಪನಿಗೆ ಹಾಸನ ಜಿಲ್ಲೆ ಮತ್ತು ತಾಲ್ಲೂಕಿನ ಬೊಮ್ಮನಾಯಕನಹಳ್ಳಿ ಗ್ರಾಮದಲ್ಲಿ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ವಂತ ಉಪಯೋಗದ ಪ್ರವರ್ಗದಡಿ (Captive Consumption) ಸ್ಥಾಪಿಸಿ, ಸದರಿ ವಿದ್ಯುತ್ ಉತ್ಪಾದನಾ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತಕ್ಕೆ ಉಪಯೋಗಿಸಿಕೊಳ್ಳಲು (Captive use) ಅನುಮತಿ ಕೋರಿರುವುದಾಗಿ ತಿಳಿಸಿ, ಸದರಿ ಕೋರಿಕೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಪ್ರಸ್ತಾವನೆಯನ್ನು ಏಕ ಕಡತ ಪದ್ಧತಿಯಡಿ ಮೇಲೆ ಓದಲಾದ ಕಡತದ ಮೂಲಕ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿವರ | : | ಜಿಲ್ಲೆ : ಹಾಸನ<br>ತಾಲ್ಲೂಕು : ಹಾಸನ<br>ಗ್ರಾಮ : ಬೊಮ್ಮನಾಯಕನಹಳ್ಳಿ |
| ಯೋಜನಾ ಜಮೀನಿನ ವಿವರ | : | ಖಾಸಗಿ ಜಮೀನು |
| ಯೋಜನಾ ಪ್ರದೇಶದ ಸಮೀಪವಿರುವ ಸಬ್ ಸ್ಟೇಷನ್ | : | ಹಾಸನ |
| ಯೋಜನಾ ಪ್ರದೇಶದ ವಿವರ | : | Latitude (N): 12.9°<br>Longitude (E): 76.2° |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | Captive Consumption |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಅರ್ಜಿ ನೋಂದಣಿ ಶುಲ್ಕ ಪಾವತಿಸಿದೆ |

MD KREDL

M/s Petronet MHB Limited., ಕಂಪನಿಗೆ ಹಾಸನ ಜಿಲ್ಲೆ ಮತ್ತು ತಾಲ್ಲೂಕಿನ ಬೊಮ್ಮನಾಯಕನಹಳ್ಳಿ ಗ್ರಾಮದಲ್ಲಿ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ವಂತ ಉಪಯೋಗದ ಪ್ರವರ್ಗದಡಿ (Captive Consumption) ಸ್ಥಾಪಿಸಿ, ಸದರಿ ವಿದ್ಯುತ್ ಉತ್ಪಾದನಾ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತಕ್ಕೆ ಉಪಯೋಗಿಸಿಕೊಳ್ಳಲು (Captive use) ನಿರಾಕ್ಷೇಪಣೆಯನ್ನು ನೀಡುವ ಕುರಿತಾದ ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 554 ಎನ್‌ಸಿಇ 2018,**
**ಬೆಂಗಳೂರು, ದಿನಾಂಕ: 17.10.2018.**

GM 23.10.18

GM (Tech) KREDL

M/s Petronet MHB Limited., ಕಂಪನಿಗೆ ಹಾಸನ ಜಿಲ್ಲೆ ಮತ್ತು ತಾಲ್ಲೂಕಿನ ಬೊಮ್ಮನಾಯಕನಹಳ್ಳಿ ಗ್ರಾಮದಲ್ಲಿ 1.5 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ವಂತ ಉಪಯೋಗದ ಪ್ರವರ್ಗದಡಿ (Captive Consumption) ಸ್ಥಾಪಿಸಿ, ಸದರಿ ವಿದ್ಯುತ್ ಉತ್ಪಾದನಾ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು

AGM -59 1.0 -59 26/10

...2)

ಸ್ವಂತಕ್ಕೆ ಉಪಯೋಗಿಸಿಕೊಳ್ಳಲು (Captive use) ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿದೆ.

1. M/s Petronet MHB Limited., ಸದರಿ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಪರವಾನಿಗೆ / ಅನುಮತಿ / ಅನುಮೋದನೆಗಳನ್ನು ಸಂಬಂಧಿಸಿದ ಇಲಾಖೆಗಳ / ಸಂಸ್ಥೆಗಳ / ಸಕ್ಷಮ ಪ್ರಾಧಿಕಾರಗಳಿಂದ ಪಡೆದುಕೊಳ್ಳತಕ್ಕದ್ದು;
2. M/s Petronet MHB Limited., ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ಘಟಕವನ್ನು Captive Consumption Category ಅಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು ಸ್ವಂತಕ್ಕೆ ಉಪಯೋಗಿಸಿಕೊಳ್ಳಲು (Captive use) ಹಾಗೂ ಈ ಸಂಬಂಧ ಅಗತ್ಯವಿರುವ ವಿದ್ಯುತ್ ಜಾಲಕ್ಕೆ ಜೋಡಣೆ ಮಾಡಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಮತ್ತು ಬ್ಯಾಂಕಿಂಗ್ ಒಪ್ಪಂದ ಮಾಡಿಕೊಳ್ಳಲು ಅನುಮತಿಸಿದೆ;
4. M/s Petronet MHB Limited., ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
5. ಯೋಜನಾ ಅಭಿವೃದ್ಧಿದಾರರು ಕೆ.ಆರ್.ಇ.ಡಿ.ಎಲ್ ಸಂಸ್ಥೆಗೆ ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು (Facilitation fee) ಹಂಚಿಕೆಯ ಆದೇಶದ ದಿನದಿಂದ 15 ದಿನಗಳೊಳಗೆ ಪಾವತಿಸಬೇಕೆಂದು ಹಾಗೂ ನಲವತ್ತೈದು ದಿನಗಳೊಳಗೆ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದು;
6. ಸದರಿ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸರ್ಕಾರಿ ಆದೇಶದ ಷರತ್ತುಗಳನ್ವಯ ಪ್ರಸ್ತಾವಿತ ಯೋಜನೆಯು ಪೂರ್ಣವಾಗಿ ಅನುಷ್ಠಾನಗೊಂಡ ನಂತರ ಸಂಬಂಧಪಟ್ಟ ಅಭಿವೃದ್ಧಿದಾರರಿಗೆ ಹಿಂದಿರುಗಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಅಗತ್ಯ ಕ್ರಮ ವಹಿಸತಕ್ಕದ್ದು;
7. M/s Petronet MHB Limited., ಸ್ಥಾಪಿಸುತ್ತಿರುವ ಈ ಸೌರ ವಿದ್ಯುತ್ ಘಟಕಕ್ಕೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.
8. ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಆದೇಶ ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.
**ಪ್ರತಿ:**
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ, ವಿಕಾಸ ಸೌಧ, ಬೆಂಗಳೂರು-1.

....3)

2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು–560 001.
5. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು.
6. ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ, ಹಾಸನ.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
8. ಉಪ ಅರಣ್ಯ ಸಂರಕ್ಷಣಾಧಿಕಾರಿ, ಹಾಸನ ಜಿಲ್ಲೆ, ಹಾಸನ.
9. M/s Petronet MHB Limited., Corporate, Miller, 2nd Floor, Block-B, 332/1, Thimmaiah Road, Vasanth Nagar, Bengaluru-52.
10. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರು, ವಿಧಾನ ಸೌಧ.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.